ಶ್ರೀ ಹೆಚ್. ಡಿ. ದೇವೇಗೌಡ (ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು).—

ಅ) ಹೌದು.

ಆ) ಹುಲ್ಲಹಳ್ಳಿ ಅಣೆಕಟ್ಟು ದುರಸ್ತಿ ಕೆಲಸವನ್ನು ೭.೪೦ ಲಕ್ಷ ರೂ.ಗಳ ಅಂದಾಜು ವೆಚ್ಚದಲ್ಲಿ ೧೯೮೬–೮೭ರಲ್ಲಿ ಪ್ರಾರಂಭಿಸಲಾಗಿದ್ದು ಮಂಕ್ತಾಯದ ಹಂತದಲ್ಲಿದೆ. ೧೯೮೭–೮೮ರ ಸಾಲಿನಲ್ಲಿ ದುರಸ್ತಿಗಾಗಿ ಹುಲ್ಲಹಳ್ಳಿ ಕಾಲುವೆಗೆ ೨.೭೪ ಲಕ್ಷ ರೂ.ಗಳ ಅನುದಾನವನ್ನು ಒದಗಿಸಲಾಗಿದ್ದು, ಳಳ್ಳ,೦೦೦ರೂ. ಗಳನ್ನೂ ರಾಂಪುರ ಕಾಲುವೆಗೆ ೨.೬೦ ಲಕ್ಷ ರೂ.ಗಳ ಅನುದಾನವನ್ನು ಒದಗಿಸಲಾಗಿದ್ದು, ೨೭,೦೦೦ ರೂ.ಗಳನ್ನು ವೆಚ್ಚ ಮಾಡಲಾಗಿದೆ. ಹಣಕಾಸಿನ ಪರಿಸ್ಥಿತಿಯನ್ನು ಅವಲಂಬಿಸಿ ದುರಸ್ತಿ ಕೆಲಸವನ್ನು ತೆಗೆದುಕೊಳ್ಳಲಾಗುವುದು.

ದ್ರಾಕ್ಷಿ ಬೆಳೆಗಾರರ ಸಮಸ್ಯೆ

೧೬೨. ಶ್ರೀ ಕೆ. ಪಿ. ಮಗಣ್ಣನವರ್ (ಸದಲಗಾ).—ಮಾನ್ಯ ಕೃಷಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ದ್ರಾಕ್ಷಿ ಬೆಳೆಯು ಮಳೆಯಿಂದ ಹಾನಿಗೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಮಹಾರಾಷ್ಟ್ರ ರಾಜ್ಯದಲ್ಲಿ ವಿಮಾ ಯೋಜನೆ ಜಾರಿಯಲ್ಲಿರುವಂತೆ ನಮ್ಮ ಸರ್ಕಾರದ ಈ ಯೋಜನೆಯನ್ನು ಅನುಷ್ಠಾನಕ್ಕೆ ತರಲು ಅನುಕೂಲಕರ ಕಾನೂನನ್ನು ರೂಪಿಸುವುದೇ ?

ಶ್ರೀ ಆರ್. ವಿ. ದೇಶಪಾಂಡೆ (ಕೃಷಿ ಮಂತ್ರಿಗಳು).—

ಅ) ಹೌದು. ಸಹಜವಾಗಿ ಮಳೆಗಾಲದಲ್ಲಿ ಬಿದ್ದ ಮಳೆಯಿಂದ ದ್ರಾಕ್ಷಿ ಬೆಳೆಗೆ ಹಾನಿಯಾಗುವುದಿಲ್ಲ. ಆದರೆ ಈ ಸಾಲಿನಲ್ಲಿ (೮೭–೮೮) ನವೆಂಬರ್ ಮತ್ತು ಡಿಸೆಂಬರ್ ತಿಂಗಳುಗಳಲ್ಲಿ ಬಿದ್ದ ಅಕಾಲಿಕ ಮಳೆಯಿಂದ ಪರಾಗಸ್ಪರ್ಶ ಹಂತದಲ್ಲಿದ್ದ ದ್ರಾಕ್ಷಿ ತೋಟಗಳಿಗೆ ಸ್ವಲ್ಪಮಟ್ಟಿಗೆ ಹಾನಿಯಾಗಿರುತ್ತೆ. ಆದರೆ ೮೬–೮೭ನೇ ಸಾಲಿನಲ್ಲಿ ಇಂತಹ ಹಾನಿ ಕಂಡುಬಂದಿಲ್ಲ.

ಆ) ಇತ್ತೀಚೆಗೆ ಮಹಾರಾಷ್ಟ್ರ ರಾಜ್ಯದಲ್ಲಿ ದ್ರಾಕ್ಷಿ ಬೆಳೆಗಾರರ ಸಂಘದ ಮೂಲಕ ದ್ರಾಕ್ಷಿ ಬೆಳೆ ವಿಮಾ ಯೋಜನೆಯನ್ನು ತಂದಿರುವ ವಿಷಯ ತಿಳಿದುಬಂದಿದೆ. ಈ ಬಗ್ಗೆ ಅಲ್ಲಿಂದ ವರದಿಯನ್ನು ತರಿಸಿಕೊಳ್ಳಲಾಗುತ್ತಿದೆ. ವರದಿಬಂದ ನಂತರ ಅದನ್ನು ಪರಿಶೀಲಿಸಿ ಕ್ರಮ ತೆಗೆದುಕೊಳ್ಳಲಾಗುವುದು.

ಸಂಕೇಶ್ವರ ಷುಗರ್‌ಕೇನ್ ರಿಸರ್ವ್ ಸ್ಟೇಷನ್‌ದ ಬಗ್ಗೆ

೧೬೪. ಶ್ರೀ ಮಲ್ಲಾರಿಗೌಡ ಎಸ್. ಪಾಟೀಲ್ (ಸಂಕೇಶ್ವರ್).— ಮಾನ್ಯ ಕೃಷಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಸಂಕೇಶ್ವರ್ ಕಬ್ಬು ಸಂಶೋಧನಾ ಕೇಂದ್ರ ಸ್ಥಾಪನೆಯಾದದ್ದು ಯಾವಾಗ ?

ಆ) ಬೇಕಾಗಿರುವ ಜಮೀನಿನ ಕ್ಷೇತ್ರವೆಷ್ಟು ಹಾಗೂ ಇದನ್ನು ಸ್ವಾಧೀನ ಪಡಿಸಿಕೊಳ್ಳುವಲ್ಲಿ ವಿಳಂಬ ಆಗುತ್ತಿರುವುದಕ್ಕೆ ಕಾರಣವೇನು ?

ಶ್ರೀ ಆರ್. ವಿ. ದೇಶಪಾಂಡೆ (ಕೃಷಿ ಸಚಿವರು).—

ಅ) ಸಂಕೇಶ್ವರ ಕಬ್ಬು ಸಂಶೋಧನಾ ಕೇಂದ್ರವನ್ನು ೧೯೫೯ರಲ್ಲಿ ಸ್ಥಾಪಿಸಲಾಯಿತು.

ಆ) ಈ ಸಂಶೋಧನಾ ಕೇಂದ್ರಕ್ಕೆ ಬೇಕಾದ ಒಟ್ಟು ಜಮೀನು ೫೪.೦೧ ಎಕರೆಗಳು. ಇದರಲ್ಲಿ ೨೮.೨೬ ಎಕರೆ ಪ್ರದೇಶವನ್ನು ಈಗಾಗಲೇ ಸ್ವಾಧೀನ ಪಡಿಸಿಕೊಳ್ಳಲಾಗಿದೆ. ಇನ್ನುಳಿದ ಜಮೀನಿಗೆ ಸಂಬಂಧಿಸಿದಂತೆ, ಸರ್ವೋಚ್ಚ ನ್ಯಾಯಾಲಯದ ಮುಂದೆ ಮೊಕದ್ದಮೆ ಇರುವುದರಿಂದ ಇದನ್ನು ಸ್ವಾಧೀನ ಪಡಿಸಿಕೊಳ್ಳಲು ವಿಳಂಬವಾಗಿದೆ.